ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ದೂ: 080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001,
ದಿನಾಂಕ:23.11.2016

ಸಂ:ಕಾಶಿಇ/ಶೈವಿ/141/ತರಗತಿ-ಫಲಿತಾಂಶ/2016-17

# ಸುತ್ತೋಲೆ

ವಿಷಯ: ಇಲಾಖಾ ವ್ಯಾಪ್ತಿಯ ಸರ್ಕಾರಿ ಪದವಿ ಕಾಲೇಜುಗಳಲ್ಲಿನ ಫಲಿತಾಂಶ ಹಾಗೂ ತರಗತಿಗಳನ್ನು ಶಿಫ್ಟ್ ಆಧಾರದ ಮೇಲೆ ನಡೆಸಲಾಗುತ್ತಿರುವ ಕಾಲೇಜುಗಳ ಮಾಹಿತಿಯನ್ನು ನೀಡುವ ಬಗ್ಗೆ.

ಉಲ್ಲೇಖ: ಮಾನ್ಯ ಆಯುಕ್ತರ ಟಿಪ್ಪಣಿ ಸಂಖ್ಯೆ:ಕಾಶಿಆ/01/ಆಆಶಾ/2016-17,ದಿನಾಂಕ:11.11.2016.

* * * * * * *

ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಶೇಕಡವಾರು ಅತೀ ಕಡಿಮೆ ಫಲಿತಾಂಶ ಪಡೆದಿರುವ ಕಾಲೇಜುಗಳಿರುವುದು ಕಂಡುಬಂದಿರುತ್ತದೆ ಮತ್ತು ಕೆಲವು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಶಿಫ್ಟ್ ಆಧಾರದ ಮೇಲೆ ತರಗತಿಗಳನ್ನು ನಡೆಸುತ್ತಿರುವುದು ತಿಳಿದು ಬಂದಿರುತ್ತದೆ. ಆದುದರಿಂದ ***2015-16ನೇ ಸಾಲಿನಲ್ಲಿ ಕಲಾ ವಿಭಾಗದಲ್ಲಿ ಆಂಗ್ಲ ಭಾಷೆ, ವಾಣಿಜ್ಯ ವಿಭಾಗದಲ್ಲಿ ಅಕೌಂಟೆನ್ಸಿ, ವಿಜ್ಞಾನ ವಿಭಾಗದಲ್ಲಿ ಗಣಿತಶಾಸ್ತ್ರ ವಿಷಯಗಳಲ್ಲಿ ಶೇಕಡವಾರು ಉತ್ತೀರ್ಣರಾಗಿರುವ ವಿದ್ಯಾರ್ಥಿಗಳ ಮಾಹಿತಿಯನ್ನು ಹಾಗೂ ಯಾವ ಯಾವ ಕಾಲೇಜುಗಳಲ್ಲಿ ಶಿಫ್ಟ್ ಆಧಾರದ ಮೇಲೆ ತರಗತಿಗಳನ್ನು ನಡೆಸಲಾಗುತ್ತಿದೆ? 2016-17ನೇ ಸಾಲಿನ ವಿದ್ಯಾರ್ಥಿಗಳ ಸಂಖ್ಯೆ, ಕಾಲೇಜಿನಲ್ಲಿರುವ ಕೊಠಡಿಗಳ ಸಂಖ್ಯೆ, ಅದರಲ್ಲಿ ಎಷ್ಟು ತರಗತಿ ಕೊಠಡಿಗಳನ್ನು ಹಾಗೂ ಎಷ್ಟು ಡೆಸ್ಕುಗಳನ್ನು ಒಂದನೇ ಶಿಫ್ಟ್‌ನಲ್ಲಿ ಉಪಯೋಗಿಸಿಕೊಳ್ಳಲಾಗುತ್ತಿದೆ ಹಾಗೂ ಎರಡನೇ ಶಿಫ್ಟ್‌ಗೆ ಎಷ್ಟು ತರಗತಿ ಕೊಠಡಿಗಳನ್ನು ಹಾಗೂ ಡೆಸ್ಕ್‌ಗಳನ್ನು ಉಪಯೋಗಿಸಿಕೊಳ್ಳಲಾಗುತ್ತಿದೆ*** ಇತ್ಯಾದಿ ವಿವರಗಳನ್ನು ದಿನಾಂಕ:03.12.2016 ರೊಳಗಾಗಿ ಇಲಾಖೆಯ ವೆಬ್‌ಸೈಟ್ ವಿಳಾಸ www.dce.kar.nic.in ನಲ್ಲಿ ಅಳವಡಿಸಲಾಗಿರುವ ಪ್ರತ್ಯೇಕ *(ಫಲಿತಾಂಶ ಮತ್ತು ಶಿಫ್ಟ್ ಆಧಾರದ ತರಗತಿಗಳು)* Google Form ಗಳಲ್ಲಿ ಅಪೇಕ್ಷಿಸಿರುವ ಮಾಹಿತಿಗಳನ್ನು ಕಡ್ಡಾಯವಾಗಿ ನೀಡಲು ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

1. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ ಮಂಗಳೂರು, ಧಾರವಾಡ ಮತ್ತು ಕಲಬುರಗಿ. - ಸೂಕ್ತ ಕ್ರಮಕ್ಕಾಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು - ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು.
4. ಕಛೇರಿ ಪ್ರತಿ.